# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 923 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಾ\|\| ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 14.03.2025 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದೇಶಿ ಅಧ್ಯಯನಕ್ಕೆ ಎಷ್ಟು ಪ್ರೋತ್ಸಾಹ ಧನ ನೀಡಲಾಗುತ್ತಿದೆ. | ಸ್ನಾತಕೋತ್ತರ ಪದವಿ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕವಾಗಿ ಗರಿಷ್ಠ ರೂ.10 ಲಕ್ಷದಂತೆ 2 ವರ್ಷಗಳಿಗೆ ರೂ.20 ಲಕ್ಷ ಅಥವಾ ವಾಸ್ತವಿಕ ವೆಚ್ಚದಲ್ಲಿ ಯಾವುದು ಕಡಿಮೆಯೋ ಅದನ್ನು ನೀಡಲಾಗುತ್ತಿದೆ.<br>ಪಿಹೆಚ್.ಡಿ ಮಾಡುವ ವಿದ್ಯಾರ್ಥಿಗಳಿಗೆ ವಾರ್ಷಿಕವಾಗಿ ಗರಿಷ್ಠ ರೂ.10 ಲಕ್ಷದಂತೆ 3 ವರ್ಷಗಳಿಗೆರೂ.30 ಲಕ್ಷ ಅಥವಾ ವಾಸ್ತವಿಕ ವೆಚ್ಚದಲ್ಲಿ ಯಾವುದು ಕಡಿಮೆಯೋ ಅದನ್ನು ನೀಡಲಾಗುತ್ತಿದೆ. |
| ಆ) | ಈ ಯೋಜನೆ ಯಾವಾಗ ಜಾರಿಯಾಯಿತು; ಜಾರಿಯಾದ ಅಂದಿನಿಂದ ಇಲ್ಲಿಯವರೆಗೆ ಎಷ್ಟು ಜನ ವಿದ್ಯಾರ್ಥಿಗಳು ಈ ಸೌಲಭ್ಯ ಬಳಸಿಕೊಂಡಿದ್ದಾರೆ; | ಈ ಯೋಜನೆಯನ್ನು 2015-16ನೇ ಸಾಲಿನಿಂದ ಜಾರಿ ಮಾಡಲಾಗಿದೆ. 2015-26ನೇ ಸಾಲಿನಿಂದ ಇಲ್ಲಿಯವರೆಗೆ ಒಟ್ಟು 334 ವಿದ್ಯಾರ್ಥಿಗಳಿಗೆ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಸೌಲಭ್ಯವನ್ನು ನೀಡಲಾಗಿದೆ. |
| ಇ) | ಪಿಹೆಚ್.ಡಿ ವ್ಯಾಸಂಗಕ್ಕೆ ಫೆಲೋಷಿಪ್ ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಒಟ್ಟಾರೆಯಾಗಿ ಪ್ರತಿ ವಿದ್ಯಾರ್ಥಿಗೆ ಎಷ್ಟು ಹಣ ನೀಡಲಾಗುತ್ತಿದೆ; | ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/- ದಂತೆ ಗರಿಷ್ಠ 3 ವರ್ಷಗಳ ಅವಧಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವ್ಯಾಸಂಗ ವೇತನ ಪಾವತಿಸಲಾಗುತ್ತಿದೆ. |
| ಈ) | ಎಷ್ಟು ಜನ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದಿದ್ದಾರೆ; (10 ವರ್ಷಗಳ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಪಿಹೆಚ್.ಡಿ ವ್ಯಾಸಂಗ ವೇತನ ಕಾರ್ಯಕ್ರಮದಡಿ ಕಳೆದ 10 ವರ್ಷಗಳಿಂದ ಸೌಲಭ್ಯ ಪಡೆದಿರುವ ವಿದ್ಯಾರ್ಥಿಗಳ ವಿವರಗಳು ಈ ಕೆಳಕಂಡಂತಿವೆ:- |

| ಕ್ರ. ಸಂ. | ಆರ್ಥಿಕ ವರ್ಷ | ವಿದ್ಯಾರ್ಥಿಗಳ ಸಂಖ್ಯೆ | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2015-16 | 600 | 206.70 |
| 2 | 2016-17 | 398 | 355.05 |
| 3 | 2017-18 | 300 | 421.65 |
| 4 | 2018-19 | 248 | 746.30 |
| 5 | 2019-20 | 359 | 536.60 |
| 6 | 2020-21 | - | - |
| 7 | 2021-22 | 507 | 1206.60 |
| 8 | 2022-23 | 171 | 848.00 |
| 9 | 2023-24 | 249 | 849.70 |
| 10 | 2024-25 | 217 | 752.50 |
| | **ಒಟ್ಟು** | **3049** | **5923.1** |

...2

<table>
<tr>
<td>ಉ)</td>
<td>ಐಎಎಸ್ / ಕೆಎಎಸ್/ ಬ್ಯಾಂಕಿಂಗ್ ಪರೀಕ್ಷೆಯ ಪೂರ್ವಭಾವಿ ತಯಾರಿಗೆ ತರಬೇತಿ ಪಡೆಯಲು ತರಬೇತಿ ಭತ್ಯೆ ನೀಡಲಾಗಿದೆಯೇ; ಭತ್ಯೆಯ ಮೊತ್ತವೆಷ್ಟು; ಎಷ್ಟು ಫಲಾನುಭವಿಗಳು ಈ ಪರೀಕ್ಷೆಯಲ್ಲಿ ಪಾಸಾಗಿ ಅಧಿಕಾರಿಗಳಾಗಿ ಹೊರಹೊಮ್ಮಿದ್ದಾರೆ?</td>
<td>ಪ್ರಸಕ್ತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯು.ಪಿ.ಎಸ್.ಸಿ ನಾಗರಿಕ ಸೇವೆಗಳು / ಬ್ಯಾಂಕಿಂಗ್ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿ ನೀಡಿದ್ದು, ತರಬೇತಿ ಭತ್ಯೆಯ ವಿವರ ಈ ಕೆಳಗಿನಂತಿದೆ.<br>
<table>
<tr><th>ತರಬೇತಿಯ ಹೆಸರು</th><th>ತರಬೇತಿ ಅವಧಿ</th><th>ಮಾಹೆಯಾನ ತಲಾ ಅಭ್ಯರ್ಥಿಗೆ ನಿಗದಿಪಡಿಸಿರುವ ತರಬೇತಿ ಭತ್ಯೆ</th></tr>
<tr><td rowspan="3">ಯು.ಪಿ.ಎಸ್.ಸಿ ನಾಗರಿಕ ಸೇವೆಗಳ ಪರೀಕ್ಷಾ ಪೂರ್ವ ತರಬೇತಿ</td><td rowspan="3">7 ರಿಂದ 9 ತಿಂಗಳು</td><td>ದೆಹಲಿಯಲ್ಲಿನ ಸಂಸ್ಥೆಯಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ರೂ.10,000/-</td></tr>
<tr><td>ಹೈದರಾಬಾದ್ ಸಂಸ್ಥೆಯಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ರೂ.8,000/-</td></tr>
<tr><td>ಕರ್ನಾಟಕ ರಾಜ್ಯದಲ್ಲಿ ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- & ಹೊರ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.6,000/-</td></tr>
<tr><td>ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿ</td><td>2 ರಿಂದ 3 ತಿಂಗಳು</td><td>ಕರ್ನಾಟಕ ರಾಜ್ಯದಲ್ಲಿ ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- & ಹೊರ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.6,000/-</td></tr>
</table>
<br>
ಇಲಾಖೆಯಿಂದ ತರಬೇತಿ ಪಡೆದ ಫಲಾನುಭವಿಗಳಲ್ಲಿ 73 ಅಭ್ಯರ್ಥಿಗಳು ಅಧಿಕಾರಿಗಳಾಗಿರುತ್ತಾರೆ.</td>
</tr>
</table>

ಸಂಖ್ಯೆ: ಹಿಂವಕ 334 ಬಿಎಂಎಸ್ 2025

(ಶಿವರಾಜ.ಎಸ್.ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.